All India Radio: Bangalore
Regional Bulletin In Kannada
21.04.2025 / 6.40 p.m.

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರೋಹಿತ್ ವೆಮುಲಾ ಕಾಯ್ದೆ ಬಗ್ಗೆ ಪರಿಶೀಲಿಸಿ ಕ್ರಮ - ಮುಖ್ಯಮಂತ್ರಿ ಸಿದ್ದರಾಮಯ್ಯ
- ಕಿಯೊನಿಕ್ಸ್‌ನ ಹೊಸ ಇ-ವಾಣಿಜ್ಯ ಜಾಲತಾಣ ಲೋಕಾರ್ಪಣೆ
- ಸ್ಮಾರ್ಟ್ ಮೀಟರ್ ಅವ್ಯವಹಾರ ಆರೋಪ; ಲೋಕಾಯುಕ್ತಕ್ಕೆ ದೂರು ನೀಡಿದ ಬಿಜೆಪಿ
- ರಾಜ್ಯ ಉಚ್ಚನ್ಯಾಯಾಲಯದ ನಾಲ್ವರು ನ್ಯಾಯಾಧೀಶರ ವರ್ಗಾವಣೆಗೆ ಸರ್ವೋಚ್ಚನ್ಯಾಯಾಲಯದ ಕೊಲಿಜಿಯಂ ಶಿಫಾರಸ್ಸು
- ಕ್ಯಾಥೊಲಿಕ್ ಧರ್ಮ ಗುರು ಪೋಪ್‌ಫ್ರಾನ್ಸಿಸ್ ನಿಧನ; ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಗಣ್ಯರ ಸಂತಾಪ

**************

ರೋಹಿತ್ ವೆಮುಲಾ ಕಾಯ್ದೆ ಜಾರಿಗೆ ತರಲು ಪ್ರಯತ್ನಿಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಕರಡು ಸಿದ್ಧಪಡಿಸುವಂತೆ ಕಾನೂನು ಸಲಹೆಗಾರರಿಗೆ ಸೂಚನೆ ನೀಡಲಾಗಿದೆ. ಈ ಕುರಿತು ಪಕ್ಷದ ವರಿಷ್ಠ ರಾಹುಲ್ ಗಾಂಧಿಯವರಿಗೆ ಪತ್ರ ಬರೆಯಲಾಗಿದೆ ಎಂದು ಹೇಳಿದರು. ರೋಹಿತ್ ವೇಮುಲಾ ಕಾಯ್ದೆ ಮೂಲಕ ಸರ್ಕಾರ ಶಿಕ್ಷಣ ಸಂಸ್ಥೆಗಳಲ್ಲಿ ಜಾತಿ ಮತ್ತು ಗುರುತು ಆಧಾರಿತ ತಾರತಮ್ಯ ತೊಡೆದುಹಾಕಲು ಕಾನೂನನ್ನು ರೂಪಿಸಿ ಜಾರಿಗೆ ತರಲು ನಿರ್ಧರಿಸಿದೆ.

ಇದೇ ವೇಳೆ, ಸಾಮಾನ್ಯ ಪ್ರವೇಶ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಜನಿವಾರ ತೆಗೆಸಿರುವ ಅಧಿಕಾರಿಗಳ ವಿರುದ್ಧ ಶಿಸ್ತಿನ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸ್ಪಷ್ಟಪಡಿಸಿದ್ದಾರೆ.

**************

ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ಅತಿ ಹೆಚ್ಚು ಅನುಭವ ಹೊಂದಿರುವ ರಾಜ್ಯ ಸರ್ಕಾರದ ಪ್ರತಿಷ್ಠಿತ ಸಂಸ್ಥೆ ಕಿಯೊನಿಕ್ಸ್‌ನ ಹೊಸ ಇ-ವಾಣಿಜ್ಯ ಜಾಲತಾಣ ಇಂದು ಲೋಕಾರ್ಪಣೆಯಾಗಿದೆ. ಲೋಕಾರ್ಪಣೆಗೊಳಿಸಿ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಇ-ವಾಣಿಜ್ಯ ಜಾಲತಾಣ ಹೊಸ ಮುನ್ನುಡಿ ಬರೆಯಲಿದೆ ಎಂದು ಹೇಳಿದ್ದಾರೆ.

ತಂತ್ರಜ್ಞಾನ ಕ್ಷೇತ್ರಕ್ಕೆ ಗ್ರಾಮೀಣ ಪ್ರದೇಶದ ಯುವಕರನ್ನು ಹೆಚ್ಚಿನ ಸಂಖ್ಯೆಯಲ್ಲಿ ಕರೆ ತರುವ ಮೂಲಕ ಗ್ರಾಮೀಣ ಯುವಕರಲ್ಲಿ ವೃತ್ತಿ ಕೌಶಲ್ಯದ ಅರಿವು ಮೂಡಿಸಬೇಕಾದ ಅವಶ್ಯಕತೆಯಿದೆ ಎಂದು ತಿಳಿಸಿದ್ದಾರೆ.

ಇದೇ ವೇಳೆ ಮಾತನಾಡಿದ ಗ್ರಾಮೀಣಾಭಿವೃದ್ಧಿ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ, ಸರ್ಕಾರದ ವಿವಿಧ ಇಲಾಖೆಗಳಿಗೆ ಅನುಕೂಲವಾಗುವಂತೆ ಕಿಯೋನಿಕ್ಸ್ ಹೊಸ ಇ-ವಾಣಿಜ್ಯ ಜಾಲತಾಣ ಸಿದ್ಧಪಡಿಸಲಾಗಿದೆ ಎಂದು ಹೇಳಿದ್ದಾರೆ. ಕಳೆದ ಎರಡು ವರ್ಷಗಳಿಂದ ಕಿಯೊನಿಕ್ಸ್ ಸಂಸ್ಥೆ ಎದುರಿಸುತ್ತಿದ್ದ ಹಲವಾರು ಸಮಸ್ಯೆಗಳಿಗೆ ಈ ಜಾಲತಾಣ ಪರಿಹಾರ ನೀಡಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಇ-ವಾಣಿಜ್ಯ ಜಾಲತಾಣ ಮೂಲಕ ಪಾರದರ್ಶಕ ವ್ಯವಹಾರ ಸಾಧ್ಯ ಎಂದು ಕಿಯೊನಿಕ್ಸ್ ಅಧ್ಯಕ್ಷ ಶರತ್ ಬಚ್ಚೇಗೌಡ ತಿಳಿಸಿದ್ದಾರೆ.

**************

ಸ್ಮಾರ್ಟ್ ಮೀಟರ್ ವಿಷಯದಲ್ಲಿ ಹತ್ತಾರು ಅವ್ಯವಹಾರದ ದೂರುಗಳಿದ್ದು, ಲೋಕಾಯುಕ್ತರ ಗಮನಕ್ಕೆ ತರಲಾಗಿದೆ ಎಂದು ಮಾಜಿ ಉಪಮುಖ್ಯಮಂತ್ರಿ ಬಿಜೆಪಿ ಶಾಸಕ ಡಾ.ಸಿ.ಎನ್.ಅಶ್ವತನಾರಾಯಣ್ ತಿಳಿಸಿದ್ದಾರೆ.

ಈ ಕುರಿತಂತೆ ಲೋಕಾಯುಕ್ತಕ್ಕೆ ದೂರು ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭ್ರಷ್ಟಾಚಾರದ ಕುರಿತು ಲೋಕಾಯುಕ್ತರಿಗೂ ವಿವರಿಸಿದ್ದು, ಲೋಕಾಯುಕ್ತ ಎಸ್ಪಿಗೆ ದೂರು ನೀಡಲಾಗಿದೆ ಎಂದು ಹೇಳಿದ್ದಾರೆ.

ಸ್ಮಾರ್ಟ್ ಮೀಟರನ್ನು ಗ್ರಾಹಕರಿಗೆ ಕಡ್ಡಾಯ ಮಾಡಲು ಕಾನೂನಿನಲ್ಲಿ ಅವಕಾಶ ಇಲ್ಲ. ಆದರೂ ಕಡ್ಡಾಯ ಮಾಡಲಾಗಿದ್ದು, ಕಪ್ಪು ಪಟ್ಟಿಗೆ ಸೇರಿದ ಕಂಪನಿ ಜೊತೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆ ಎಂದು ದೂರಿದ್ದಾರೆ.

ಇಂಧನ ಸಚಿವ ಕೆ.ಜೆ.ಜಾರ್ಜ್, ಪ್ರಧಾನ ಕಾರ್ಯದರ್ಶಿ ಗೌರವ್ ಗುಪ್ತ, ಬೆಸ್ಕಾಂ ಎಂ.ಡಿ. ಮಹಂತೇಶ್, ತಾಂತ್ರಿಕ ನಿರ್ದೇಶಕರಾದ ರಮೇಶ್, ಬಾಲಾಜಿ ಮತ್ತಿತರರ ವಿರುದ್ಧ ದೂರು ನೀಡಲಾಗಿದೆ ಎಂದು ಅವರು ತಿಳಿಸಿದರು.

**************

ಬಿಜೆಪಿಯ ೧೮ ಶಾಸಕರ ಅಮಾನತು ರದ್ದುಗೊಳಿಸುವಂತೆ ವಿಧಾನಸಭಾ ಪ್ರತಿಪಕ್ಷ ನಾಯಕ ಆರ್.ಅಶೋಕ ನೇತೃತ್ವದಲ್ಲಿ ಬಿಜೆಪಿ ಶಾಸಕರು ಸಭಾಧ್ಯಕ್ಷ ಯು.ಟಿ.ಖಾದರ್ ಅವರನ್ನು ವಿಧಾನಸೌಧದಲ್ಲಿಂದು ಭೇಟಿ ಮಾಡಿ ಮನವಿ ಸಲ್ಲಿಸಿದ್ದಾರೆ.

ಬಳಿಕ ಮಾತನಾಡಿದ ಪ್ರತಿಪಕ್ಷ ನಾಯಕ ಆರ್.ಅಶೋಕ, ಉದ್ದೇಶಪೂರ್ವಕವಾಗಿ ವಿಧಾನಸಭೆಯಲ್ಲಿ ಗದ್ದಲ ಉಂಟು ಮಾಡಿಲ್ಲ ಎಂದು ತಿಳಿಸಿದ್ದಾರೆ. ಸಭಾಧ್ಯಕ್ಷರಿಗೆ ಅಗೌರವ ತೋರುವ ಉದ್ದೇಶ ಹೊಂದಿರಲಿಲ್ಲ. ಸಚಿವ ಕೆ.ಎನ್.ರಾಜಣ್ಣ ಸಿಡಿ ವಿಚಾರ ಕುರಿತಂತೆ ಪ್ರತಿಭಟನೆ ನಡೆಸಲಾಗಿತ್ತು ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ: ಆರ್.ಅಶೋಕ

ಇದೇ ವೇಳೆ ಶಾಸಕರನ್ನು ಆರು ತಿಂಗಳು ಅಮಾನತುಗೊಳಿಸುವುದು ನ್ಯಾಯಯುತ ಕ್ರಮವಲ್ಲ ಎಂದು ಹೇಳಿದ್ದಾರೆ.

**************

ರಾಜ್ಯ ಉಚ್ಚ ನ್ಯಾಯಾಲಯದ ನಾಲ್ವರು ನ್ಯಾಯಾಧೀಶರ ವರ್ಗಾವಣೆಗೆ ಸರ್ವೋಚ್ಚ ನ್ಯಾಯಾಲಯ ಕೊಲಿಜಿಯಂ ಶಿಫಾರಸ್ಸು ಮಾಡಿದೆ. ನ್ಯಾಯಮೂರ್ತಿ ಕೃಷ್ಣ ದೀಕ್ಷಿತ್ ಅವರನ್ನು ಒಡಿಶಾ ಹೈಕೋರ್ಟ್‌ಗೆ, ನ್ಯಾಯಮೂರ್ತಿ ಕೆ.ನಟರಾಜನ್ ಅವರನ್ನು ಕೇರಳ, ನ್ಯಾಯಮೂರ್ತಿ ಹೇಮಂತ್ ಚಂದನ ಗೌಡರ್ ಅವರನ್ನು ಮದ್ರಾಸ್ ಹಾಗೂ ನ್ಯಾಯಮೂರ್ತಿ ಸಂಜಯ್ ಗೌಡ ಅವರನ್ನು ಗುಜರಾತ್ ಹೈಕೋರ್ಟ್‌ಗೆ ವರ್ಗಾಯಿಸಲಾಗಿದೆ.

ಏಪ್ರಿಲ್ ೧೫ ಮತ್ತು ಏಪ್ರಿಲ್ ೧೯ ರಂದು ನಡೆದ ಕೊಲಿಜಿಯಂ ಸಭೆಗಳಲ್ಲಿ ಈ ಸಂಬಂಧ ನಿರ್ಧಾರ ತೆಗೆದುಕೊಳ್ಳಲಾಗಿತ್ತು.

ಔಪಚಾರಿಕ ಘೋಷಣೆಗೂ ಮುನ್ನ ಕರ್ನಾಟಕ ವಕೀಲರ ಸಂಘ, ಧಾರವಾಡ ಪೀಠವು ಮುಖ್ಯನ್ಯಾಯಮೂರ್ತಿ ಸಂಜೀವ್ ಖನ್ನಾ ಅವರಿಗೆ ಪತ್ರ ಬರೆದು, ನಾಲ್ವರು ನ್ಯಾಯಾಧೀಶರನ್ನು ವರ್ಗಾವಣೆ ಮಾಡದಂತೆ ಮನವಿ ಮಾಡಿತ್ತು.

**************

ಕ್ಯಾಥೋಲಿಕ್ ಧರ್ಮಗುರು ಪೋಪ್‌ಫ್ರಾನ್ಸಿಸ್ ವ್ಯಾಟಿಕನ್ ನಗರದಲ್ಲಿ ಇಂದು ಬೆಳಿಗ್ಗೆ ಇಹಲೋಕ ತ್ಯಜಿಸಿದರು ಎಂದು ವ್ಯಾಟಿಕನ್ ಪ್ರಕಟಣೆ ತಿಳಿಸಿದೆ. ಪೋಪ್ ದೀನದಲಿತರಿಗೆ ಭರವಸೆಯ ಬೆಳಕಾಗಿದ್ದರು ಎಂದು ಪ್ರಧಾನಿ ನರೇಂದ್ರ ಮೋದಿ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ, ಸಾಮಾಜಿಕ ಜಾಲತಾಣದಲ್ಲಿ ಸಂತಾಪ ಸೂಚಿಸಿದ್ದು, ಕ್ರೈಸ್ತ ಸಮುದಾಯಕ್ಕೆ ಪೋಪ್ ನಿಧನದ ದುಃಖ ಭರಿಸುವ ಶಕ್ತಿ ನೀಡಲಿ ಎಂದು ಹೇಳಿದ್ದಾರೆ. ಪೋಪ್ ಅವರು ಶಾಂತಿ ಸಹಾನುಭೂತಿಯ ಸಂಕೇತ ಎಂದು ಮುಖ್ಯಮಂತ್ರಿ ಬಣ್ಣಿಸಿದ್ದಾರೆ.

**************

ಕೃಷಿ ಚಟುವಟಿಕೆಗಳಿಗೆ ಸಹಕಾರಿಯಾಗಲೆಂದು ನಿರ್ಮಿಸುತ್ತಿರುವ ಕೃಷಿ ಹೊಂಡಗಳಲ್ಲಿ ಅನೇಕರು ಪ್ರಾಣ ಕಳೆದುಕೊಳ್ಳುತ್ತಿರುವ ಪ್ರಕರಣಗಳು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಹೆಚ್ಚುತ್ತಿದ್ದು, ಸುರಕ್ಷತಾ

ಕ್ರಮಗಳನ್ನು ಕಡ್ಡಾಯಗೊಳಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಸೂಚಿಸಿದ್ದಾರೆ.

ಜಿಲ್ಲೆಯ ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಮಾತನಾಡಿದ ಅವರು, ಕೃಷಿಹೊಂಡಗಳ ಸುತ್ತಲೂ ತಂತಿ ಬೇಲಿ ಅಳವಡಿಸುವುದೂ ಸೇರಿದಂತೆ ಅಗತ್ಯವಿರುವ ಎಲ್ಲಾ ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಕೃಷಿ ಹೊಂಡಗಳ ವಿಚಾರದಲ್ಲಿ ರೈತರು ಮತ್ತು ಅವರ ಕುಟುಂಬದ ಸದಸ್ಯರು ಹಾಗೂ ಸಾರ್ವಜನಿಕರು ಅತ್ಯಂತ ಎಚ್ಚರಿಕೆಯಿಂದ ಇರಬೇಕು ಎಂದು ತಿಳಿಸಿದ್ದಾರೆ.

**************

ಮಹಾತ್ಮ ಗಾಂಧೀಜಿ ಬದುಕಿದ ರೀತಿ, ಹೋರಾಟದ ಗತಿ ಮತ್ತು ಅವರು ಬೋಧಿಸಿ, ಪಾಲಿಸಿದ ತತ್ವ, ಜೀವನ ಸಂದೇಶಗಳು ಇಂದಿನ ಸರಕಾರಗಳ ಮತ್ತು ಆಡಳಿತದ ಮೂಲ ತತ್ವಗಳಾಗಿವೆ ಎಂದು ಕಾರ್ಮಿಕ ಸಚಿವ ಸಂತೋಷ ಎಸ್. ಲಾಡ್ ತಿಳಿಸಿದ್ದಾರೆ.

ಧಾರವಾಡ ಕೇಂದ್ರ ಬಸ್ ನಿಲ್ದಾಣ ಸಮೀಪ ಧಾರವಾಡ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ನೂತನವಾಗಿ ನಿರ್ಮಿಸಿರುವ ಗಾಂಧಿ ಭವನವನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಈ ಗಾಂಧಿ ಭವನ ಅತೀ ಸುಂದರವಾಗಿ ರೂಪುಗೊಂಡಿದೆ ಎಂದು ಹೇಳಿದ್ದಾರೆ.

ಧ್ವನಿ: ಸಂತೋಷ್ ಲಾಡ್

**************

ಗದಗ ಜಿಲ್ಲೆಯ ಕೊಣ್ಣೂರ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ೨೦೨೫-೨೬ನೇ ಸಾಲಿನ ಸಾಮೂಹಿಕ ಬದು ಕಾಮಗಾರಿ ನಿರ್ಮಾಣ ಸ್ಥಳಕ್ಕೆ ನರಗುಂದ ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಕೆ. ಇನಾಮದಾರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಮನ್ರೇಗಾ ಯೋಜನೆಯಡಿ ಉದ್ಯೋಗ ಖಾತರಿ ಕೂಲಿ ಮೊತ್ತ ೩೭೦ ರೂಪಾಯಿಗೆ ಹೆಚ್ಚಳವಾಗಿದೆ. ಎಲ್ಲರೂ ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

**************

ದಕ್ಷಿಣ ಒಳನಾಡಿನ ಹಲವೆಡೆ ಹಾಗೂ ಕರಾವಳಿ ಮತ್ತು ಉತ್ತರ ಒಳನಾಡಿನ ಕೆಲವೆಡೆ ಮಳೆಯಾಗಿದೆ.

ದಾವಣಗೆರೆ ೬ ಸೆಂಟಿಮೀಟರ್, ತುಮಕೂರು ೪, ಉಡುಪಿ, ಸಿದ್ದಾಪುರ, ಧರ್ಮಸ್ಥಳದಲ್ಲಿ ತಲಾ ೩ ಸೆಂಟಿಮೀಟರ್ ಮಳೆಯಾಗಿದೆ.

ಇಂದು ಉತ್ತರಕನ್ನಡ, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಹಲವೆಡೆ ಹಗುರದಿಂದ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಬೆಂಗಳೂರಿನಲ್ಲಿ ಗರಿಷ್ಠ ೩೪ ಡಿಗ್ರಿ, ಕನಿಷ್ಠ ೨೩ ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ಸಾಧ್ಯತೆಯಿದೆ.

*******ಮುಕ್ತಾಯ*******